ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
2ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು 560001
ದೂರವಾಣಿ ಸಂಖ್ಯೆ:080-22372738, e-mail: nregs-ka@nic.in

ಸಂಖ್ಯೆ:ಗ್ರಾಅಪ/160/ಉಖಾಯೋ/2010

ದಿನಾಂಕ:23-01-2014

ಗೆ,

1. ರಾಜ್ಯದ ಎಲ್ಲಾ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಿಗಳು
   ಜಿಲ್ಲಾ ಪಂಚಾಯತ್
2. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.

ಮಾನ್ಯರೇ,

ವಿಷಯ: ಮಹಾತ್ಮ ಗಾಂಧಿ ನರೇಗಾ ಯೋಜನೆಯಡಿ ದೂರುಗಳಿಗೆ ಸಂಬಂಧಿಸಿದಂತೆ, ಒಂಬುಡ್ಸ್‌ಮನ್ ರವರು ನೀಡಿದ ಆದೇಶಗಳ ಮೇಲಿನ ಕ್ರಮ ಕುರಿತು K.D.P (ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ) ಸಭೆಯಲ್ಲಿ ಚರ್ಚಿಸುವ ಬಗ್ಗೆ.

ಉಲ್ಲೇಖ: 1. ಕೇಂದ್ರ ಗ್ರಾಮೀಣಾಭಿವೃದ್ಧಿ ಮಂತ್ರಾಲಯವು ಹೊರಡಿಸಿರುವ ಪರಿಷ್ಕೃತ ಒಂಬುಡ್ಸ್‌ಮನ್ ಸೂಚನೆಗಳ ಪತ್ರ ದಿನಾಂಕ:24-05-2013.
2. ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಾಮಾಜಿಕ ಪರಿಶೋಧನೆ ಮತ್ತು ಒಂಬುಡ್ಸ್‌ಮನ್ ವ್ಯವಸ್ಥೆ ಬಲಪಡಿಸುವ ಕಾರ್ಯಗಾರದ ದಿನಾಂಕ:10-01-2014.

* * * * * * *

ಮಹಾತ್ಮಗಾಂಧಿ ನರೇಗಾ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲ್ಪಡುತ್ತಿದೆ. ಇದನ್ನು ಪಂಚಾಯತ್ ರಾಜ್ ವ್ಯವಸ್ಥೆ ಹಾಗೂ 09 ಅನುಷ್ಠಾನ ಸಂಸ್ಥೆಗಳ ಮೂಲಕ ಅನುಷ್ಠಾನಗೊಳಿಸಲಾಗುತ್ತಿದೆ. ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅನುಷ್ಠಾನದಲ್ಲಿನ ದೂರುಗಳನ್ನು ಒಂಬುಡ್ಸ್‌ಮನ್ ವ್ಯವಸ್ಥೆಯ ಮೂಲಕ ಪರಿಹರಿಸಲು ಕ್ರಮವಹಿಸಲಾಗಿದೆ. ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಒಂಬುಡ್ಸ್‌ಮನ್‌ರವರು ಕಾರ್ಯನಿರ್ವಹಿಸುತ್ತಿದ್ದು, ದೂರುಗಳನ್ನು ಸ್ವೀಕರಿಸಿ, ಪರಿಶೀಲಿಸಿ ಆದೇಶಗಳನ್ನು ಹೊರಡಿಸುತ್ತಾರೆ. ಒಂಬುಡ್ಸ್‌ಮನ್ ರವರ ಆದೇಶಗಳ ಮೇಲೆ ಸಂಬಂದಪಟ್ಟ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕ್ರಮವಹಿಸುತ್ತಾರೆ.

ದಿನಾಂಕ:10-01-2014 ರಂದು ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಾಮಾಜಿಕ ಪರಿಶೋಧನೆ ಹಾಗೂ ಒಂಬುಡ್ಸ್‌ಮನ್ ವ್ಯವಸ್ಥೆಯನ್ನು ಬಲಪಡಿಸುವ ಕಾರ್ಯಗಾರದಲ್ಲಿ ಒಂಬುಡ್ಸ್‌ಮನ್ ರವರು ನೀಡಿರುವ ಆದೇಶಗಳ ಮೇಲೆ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳು ಸರಿಯಾಗಿ ಕ್ರಮವಹಿಸುತ್ತಿಲ್ಲದಿರುವ ಬಗ್ಗೆ ವಿಷಯ ಪ್ರಸ್ತಾಪವಾಗಿ ಚರ್ಚಿಸಲಾಯಿತು.

ಸಭೆಯಲ್ಲಿ ಅನುಮೋದಿತವಾದಂತೆ, ಇನ್ನೂ ಮುಂದೆ ಒಂಬುಡ್ಸ್‌ಮನ್ ರವರು ನೀಡಿರುವ ಆದೇಶಗಳ ಕುರಿತು ತೆಗೆದುಕೊಂಡ ಕ್ರಮದ ಬಗ್ಗೆ K.D.P (ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ ಸಭೆಗಳಲ್ಲಿ) ಚರ್ಚೆಯ ವಿಷಯವನ್ನಾಗಿಟ್ಟುಕೊಳ್ಳಲು ತೀರ್ಮಾನಿಸಲಾಗಿದೆ. ಅದರಂತೆ ಈ ವಿಷಯವನ್ನು ಇನ್ನೂ ಮುಂದೆ K.D.P (ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮ) ಸಭೆಗಳಲ್ಲಿ ಚರ್ಚೆಯ ವಿಷಯವಾಗಿ ಪರಿಗಣಿಸಿ, ನಡವಳಿಯಲ್ಲೂ ಸಹ ಕ್ರಮಕ್ಕಾಗಿ ಪ್ರಸ್ತಾಪಿಸುವಂತೆ ಸೂಚಿಸಲಾಗಿದೆ.

ಪತ್ರಕ್ಕೆ ಸ್ವೀಕೃತಿಯನ್ನು ನೀಡಲು ಕೋರಿದೆ.

ತಮ್ಮ ವಿಶ್ವಾಸಿ,

ಸರ್ಕಾರದ ಕಾರ್ಯದರ್ಶಿ ಹಾಗೂ ಆಯುಕ್ತರು,
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

- ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳ ಮಾಹಿತಿಗಾಗಿ.
- ವಿಶೇಷ ಆಯುಕ್ತರು ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ

- ಮುಖ್ಯ ಕಾರ್ಯಚರಣೆ ಅಧಿಕಾರಿ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ
- ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಒಂಬುಡ್ಸ್‌ಮನ್ ಜಿಲ್ಲಾ ಪಂಚಾಯತ್ ಇವರ ಮಾಹಿತಿಗಾಗಿ.
- ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಕಾರ್ಯನಿರ್ವಾಹಕ ಅಧಿಕಾರಿಗಳು ತಾಲ್ಲೂಕು ಪಂಚಾಯತ್ ಇವರಿಗೆ ನಕಲು ಪ್ರತಿಯನ್ನು ಕಳುಹಿಸಲು ಕೋರಿದೆ.
- ಸಂಪಾದಕರು ಕರ್ನಾಟಕ ವಿಕಾಸ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆ ಇವರಿಗೆ, ಕರ್ನಾಟಕ ವಿಕಾಸ ಪತ್ರಿಕೆಯಲ್ಲಿ ಪ್ರಕಟಿಸಲು ಕೋರಿದೆ.
- ವಿಶೇಷ ಅಧಿಕಾರಿಗಳು. ಗಣಕಯಂತ್ರ ವಿಭಾಗ ಮಹಾತ್ಮ ಗಾಂಧಿ ನರೇಗ ವಿಭಾಗ ಇವರಿಗೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಕೋರಿದೆ.
- ಮುಖ್ಯ ಆರ್ಥಿಕ ಸಲಹೆಗಾರರು, ಜಂಟಿ ನಿರ್ದೇಶಕರು ತಾಂತ್ರಿಕ, ಜಂಟಿ ನಿರ್ದೇಶಕರು ಆಡಳಿತ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ಇವರ ಮಾಹಿತಿಗಾಗಿ.